# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 446 (541) |
| ಸದಸ್ಯರ ಹೆಸರು | ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 20-02-2023 |
| ಉತ್ತರಿಸಬೇಕಾದ ಸಚಿವರು | ಉನ್ನತ ಶಿಕ್ಷಣ ಸಚಿವರು |

| | ಪ್ರಶ್ನೆ | ಉತ್ತರ |
|---|---|---|
| ಅ) | ಖಾಸಗಿ ಅನುದಾನಿತ ಶೈಕ್ಷಣಿಕ ಸಂಸ್ಥೆಗಳ ಸಿಬ್ಬಂದಿಗಳಿಗೆ ಕಾಲ್ಪನಿಕ ವೇತನ ನಿಗದಿಪಡಿಸುವ ಬಗ್ಗೆ ಪರಿಶೀಲಿಸಲು ರಚಿಸಲಾಗಿರುವ ಸಮಿತಿಯು ಸರ್ಕಾರಕ್ಕೆ ಸಲ್ಲಿಸಿರುವ ವರದಿಯಲ್ಲಿ ಮಾಡಿರುವ ಶಿಫಾರಸ್ಸುಗಳನ್ನು ಅನುಷ್ಠಾನಗೊಳಿಸಲು ಸರ್ಕಾರ ಯಾವ ಕ್ರಮಕೈಗೊಂಡಿದೆ; ಶಿಫಾರಸ್ಸುಗಳನ್ನು ಅನುಷ್ಠಾನಗೊಳಿಸಲು ಸರ್ಕಾರ ಯಾವುದಾದರೂ ಕಾಲಮಿತಿಯನ್ನು ಹಮ್ಮಿಕೊಂಡಿದೆಯೇ; | ಖಾಸಗಿ ಅನುದಾನಿತ ಶೈಕ್ಷಣಿಕ ಸಂಸ್ಥೆಗಳ ಸಿಬ್ಬಂದಿಗಳಿಗೆ ಕಾಲ್ಪನಿಕ ವೇತನ ನಿಗದಿಪಡಿಸುವ ಬಗ್ಗೆ ಪರಿಶೀಲಿಸಲು, ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಬಸವರಾಜ ಹೊರಟ್ಟಿರವರ ಅಧ್ಯಕ್ಷತೆಯಲ್ಲಿ 2014-2015 ಮತ್ತು 2017-18 ರಲ್ಲಿ ಸಮಿತಿಗಳನ್ನು ರಚಿಸಲಾಗಿತ್ತು. ಸದರಿ ಸಮಿತಿಗಳಲ್ಲಿ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಉನ್ನತ ಶಿಕ್ಷಣ ಇಲಾಖೆಯ ಅಧಿಕಾರಿಗಳಿದ್ದು, ಆ ಸಮಿತಿಯು ಅನುದಾನರಹಿತ ಸೇವೆಯ ಅವಧಿಯನ್ನು ಪರಿಗಣಿಸಿ ಕಾಲ್ಪನಿಕವಾಗಿ ವೇತನವನ್ನು ನಿಗಧಿಪಡಿಸಿದಲ್ಲಿ, ಸರ್ಕಾರಕ್ಕೆ ಎಷ್ಟು ವಾರ್ಷಿಕ ಆರ್ಥಿಕ ಹೊರೆ ಆಗುವುದೆಂಬ ಬಗ್ಗೆ ಸಭೆ ನಡೆಸಿ, ಸಿಬ್ಬಂದಿಗಳಿಗೆ ಹಾಲಿ ನೀಡಲಾಗುತ್ತಿರುವ ವೇತನಕ್ಕೆ ಅನುದಾನರಹಿತ ಅವಧಿಯನ್ನು ಪರಿಗಣನೆಗೆ ತೆಗೆದುಕೊಂಡು ವೇತನವನ್ನು ಪರಿಷ್ಕರಿಸಿದಲ್ಲಿ ಹೆಚ್ಚುವರಿಯಾಗಿ ವಾರ್ಷಿಕವಾಗಿ ರೂ.359.87 ಕೋಟಿಗಳ ಅನುದಾನ ಅವಶ್ಯಕತೆ ಇರುತ್ತದೆ. ಹಾಗೆಯೇ, ನಿವೃತ್ತಿ ಸೌಲಭ್ಯಗಳ ಒಟ್ಟಾರೆ ಆರ್ಥಿಕ ಹೊರೆ ರೂ.1637.61 ಕೋಟಿಗಳಾಗಿದ್ದು, ಇದರ ವರ್ಷವಾರು ಆರ್ಥಿಕ ಹೊರೆ ಸಹ ಲೆಕ್ಕ ಹಾಕಿರುವುದಿಲ್ಲ. ಈ ಎಲ್ಲಾ ಮೊತ್ತಗಳ ನಿಖರ ಮಾಹಿತಿಯನ್ನು ಸಂಗ್ರಹಿಸಲಾಗುತ್ತಿದ್ದು, ಅನುದಾನರಹಿತ ಸೇವಾ ಅವಧಿಯ ಸಂಬಂಧ ನೀಡಬೇಕಾದ ವೇತನ ಬಾಕಿ ಮೊತ್ತ ರೂ.3083.54 ಕೋಟಿಗಳೆಂದು ಅಂದಾಜಿಸಲಾಗಿದೆ.<br><br>ಆದರೆ ಸರ್ಕಾರವು ಈ ಬಗ್ಗೆ ವಿವರವಾಗಿ ಪರಿಶೀಲಿಸಿದಾಗ, ಉನ್ನತ ಶಿಕ್ಷಣ ಇಲಾಖೆಯ ಕಾಲೇಜು ಶಿಕ್ಷಣ ಇಲಾಖೆ ಹಾಗೂ ತಾಂತ್ರಿಕ ಶಿಕ್ಷಣ ಇಲಾಖೆ ಹಾಗೂ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆಯ ವ್ಯಾಪ್ತಿಯ ಪ್ರಾಥಮಿಕ ಶಿಕ್ಷಣ, ಪ್ರೌಢ ಶಿಕ್ಷಣ ಹಾಗೂ ಪದವಿ ಪೂರ್ವ ಶಿಕ್ಷಣ ಇಲಾಖೆಯ ಬೋಧಕ ಮತ್ತು ಬೋಧಕೇತರ ನೌಕರರಿಗೆ ಕಾಲ್ಪನಿಕ ವೇತನ ನಿಗಧಿಪಡಿಸಿದಲ್ಲಿ ಸರ್ಕಾರಕ್ಕೆ ಅಂದಾಜು ರೂ.5081.01 ಕೋಟಿ ಆರ್ಥಿಕ ಹೊರೆಯಾಗಲಿದೆ.<br><br>ಕಾಲೇಜು ಶಿಕ್ಷಣ ಇಲಾಖೆಯ ಕಾಲೇಜುಗಳು ಅಧಿನಿಯಮದ ವ್ಯಾಪ್ತಿಗೊಳಪಟ್ಟಿದ್ದು, ಸದರಿ 108 ಕಾಲೇಜುಗಳಲ್ಲಿ 855 ಬೋಧಕರು ಹಾಗೂ 878 ಬೋಧಕೇತರರು ಒಟ್ಟು 1733 ನೌಕರರುಗಳಿಗೆ ವೇತನ ರೂ.38.51 ಕೋಟಿ ಹಾಗೂ ಪಿಂಚಣಿ ಸೌಲಭ್ಯಕ್ಕೆ 147.76 ಕೋಟಿ ಒಟ್ಟು 185.30 ಕೋಟಿ ವಾರ್ಷಿಕ ಆರ್ಥಿಕ ಹೊರೆಯಾಗುತ್ತದೆಂದು ಅಂದಾಜಿಸಲಾಗಿದೆ.<br><br>ಸರ್ಕಾರವು ಅನುದಾನಿತ ಸಿಬ್ಬಂದಿಗಳ ಸೇವಾ ಮತ್ತು ಪಿಂಚಣಿ ಸೌಲಭ್ಯಗಳನ್ನು ನಿಯಂತ್ರಿಸುವ ಸಲುವಾಗಿ ಕರ್ನಾಟಕ ಖಾಸಗಿ ಅನುದಾನಿತ ಶೈಕ್ಷಣಿಕ ಸಂಸ್ಥೆಗಳ ಸಿಬ್ಬಂದಿಗಳ (ವೇತನ, ನಿವೃತ್ತಿ ವೇತನ ಮತ್ತು ಇತರೆ ಸೌಲಭ್ಯಗಳ ನಿಯಂತ್ರಣ) ವಿಧೇಯಕ 2014 ಅನ್ನು ಜಾರಿಗೊಳಿಸಿರುತ್ತದೆ. |
| ಆ) | ಅನುದಾನಿತ ಶೈಕ್ಷಣಿಕ ಸಂಸ್ಥೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳಿಗೆ ಸೇವೆಗೆ ಸೇರಿದ ದಿನಾಂಕ, ಅನುದಾನಕ್ಕೆ ಒಳಪಟ್ಟ ದಿನಾಂಕದ ಸೇವೆಯನ್ನು ಕಾಲ್ಪನಿಕ ವೇತನ ಬಡ್ತಿಗೆ ಸಂಬಂಧಪಟ್ಟಂತೆ ಪರಿಗಣಿಸುವ ಕುರಿತು ಸರ್ಕಾರದ ನಿಲುವೇನು; | |
| ಇ) | ಸರ್ಕಾರವು ಈ ಸಮಸ್ಯೆಯ ಪರಿಹಾರಕ್ಕೆ ಯಾವ ಕ್ರಮಗಳನ್ನು ಕೈಗೊಂಡಿದೆ; ಕೈಗೊಂಡಿದ್ದಲ್ಲಿ, ಯಾವ ಕಾಲಮಿತಿಯೊಳಗೆ ಯಾವ ಪರಿಹಾರ ಕ್ರಮ ಕೈಗೊಳ್ಳಲಾಗುವುದು? | |

| | | |
|---|---|---|
| | | ಸದರಿ ಪ್ರಕರಣಕ್ಕೆ ಸಂಬಂಧಿಸಿದಂತೆ ರಾಜ್ಯ ಉಚ್ಚ ನ್ಯಾಯಾಲಯದಲ್ಲಿ ದಾಖಲಿಸಿದ್ದ ರಿಟ್ ಅರ್ಜಿ ಸಂಖ್ಯೆ: 21216/2014ಕ್ಕೆ ದಿನಾಂಕ:10.07.2015ರಲ್ಲಿ ನೀಡಿದ ತೀರ್ಪಿನನ್ವಯ ಕರ್ನಾಟಕ ಖಾಸಗಿ ಅನುದಾನಿತ ಶೈಕ್ಷಣಿಕ ಸಂಸ್ಥೆಗಳ ಸಿಬ್ಬಂದಿಗಳ (ವೇತನ, ನಿವೃತ್ತಿ ವೇತನ ಮತ್ತು ಇತರೇ ಸೌಲಭ್ಯಗಳ ನಿಯಂತ್ರಣ) ಅಧಿನಿಯಮ 2014ನ್ನು ಸಂವಿಧಾನದ ಪರಿಚ್ಛೇದ 14ರ ವಿರುದ್ಧವಾಗಿದೆ ಎಂದು ಪರಿಗಣಿಸಿ ಅದನ್ನು ವಜಾಗೊಳಿಸಿದೆ.<br><br>ಮೇಲ್ಕಂಡ ತೀರ್ಪಿನ ವಿರುದ್ಧ ಸರ್ಕಾರವು ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ರಿಟ್ ಅಪೀಲು ಸಂಖ್ಯೆ:2476/2015ರಲ್ಲಿ ಮೇಲ್ಮನವಿ ಸಲ್ಲಿಸಿದ್ದು, ಸದರಿ ಮೇಲ್ಮನವಿಗೆ ರಾಜ್ಯ ಉಚ್ಚ ನ್ಯಾಯಾಲಯವು ದಿನಾಂಕ:27-11-2015 ರಂದು ಈ ಕೆಳಕಂಡಂತೆ ಮಧ್ಯಂತರ ತೀರ್ಪು ನೀಡಲಾಗಿದೆ.<br><br>"So far as the retired employees are concerned learned Advocate General submits that the pension they are getting shall be continued to be paid to them. He submits that in some cases the pensions are based on the old scales and in some cases after re-fixation. The State shall be paying the pension as are paid to those retired employees as of today.<br>So far as recovery proceedings and calculation of the pension in terms of the new regulation are concerned, the proceedings shall, however, remain stayed."<br><br>ಸರ್ಕಾರವು ದಾಖಲಿಸಿರುವ ರಿಟ್ ಅಪೀಲು ನ್ಯಾಯಾಲಯದಲ್ಲಿ ಬಾಕಿ ಇದ್ದು, ಈ ಕುರಿತು ಮಾನ್ಯ ರಾಜ್ಯ ಉಚ್ಚ ನ್ಯಾಯಾಲಯವು ನೀಡುವ ಅಂತಿಮ ತೀರ್ಪನ್ನು ನಿರೀಕ್ಷಿಸಿದೆ. |

ಇಡಿ 23 ಯುಪಿಸಿ 2023

**(ಡಾ. ಅಶ್ವಥ್ ನಾರಾಯಣ ಸಿ.ಎನ್.)**
ಉನ್ನತ ಶಿಕ್ಷಣ, ಐ.ಟಿ.-ಬಿ.ಟಿ. ವಿಜ್ಞಾನ ಮತ್ತು
ತಂತ್ರಜ್ಞಾನ, ವಿದ್ಯುನ್ಮಾನ ಹಾಗೂ ಕೌಶಲ್ಯಾಭಿವೃದ್ಧಿ,
ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು